**ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ, ತುರುವೇಕೆರೆ.**

**ಸಿಸಿ ಸಂಖ್ಯೆ: 997/2024 CW-11 PW-9**

**ಸಾಕ್ಷಿಯನ್ನು ದಿಃ 16.07.2026 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

| | |
|---|---|
| **ಹೆಸರುಃ** | ಮೂರ್ತಿ ಕೆ ವಿ. |
| **ತಂದೆ ಹೆಸರುಃ** | ವೆಂಕಟೇಶಪ್ಪ |
| **ವಯಸ್ಸುಃ** | 34 ವರ್ಷ |
| **ವೃತ್ತಿಃ** | ಪಿ.ಎಸ್.ಐ |
| **ವಾಸ ಸ್ಥಳಃ** | ತುರುವೇಕೆರೆ |

**ಮುಖ್ಯವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ನಾನು 24.09.2024 ರಿಂದ ಈವರಗೂ ದಂಡಿನಶಿವರ ಪೋಲೀಸ್ ಠಾಣೆಯಲ್ಲಿ ಪಿ.ಎಸ್.ಐ ಆಗಿ ಕರ್ತವ್ಯ ನಿರ್ವಸಿರುತ್ತೇನೆ.

ದಿಃ 05.10.2024 ರಂದು ಈ ಕೇಸಿನ ಕಡತವನ್ನು ಚಾಸಾ10 ರವರಿಂದ ಪಡೆದುಕೊಂಡು ತನಿಖೆಯನ್ನು ಮುಂದುವರೆಸಿ ದಿಃ 10.10.2024 ರಂದು ಚಾಸಾ5 ರವರು ಹೇಳಿಕೆಯನ್ನು ದಾಖಲಿಸಿಕೊಂಡಿರುತ್ತೇನೆ. ಅದೇ ದಿನ ಚಾಸಾ2 ರವರ ಗಾಯದ ಪ್ರಮಾಣಪತ್ರವನ್ನು ನಿಪಿ-4 ರಂತೆ ಚಾಸಾ8 ರವರಿಂದ ಪಡೆದು ಕಡತಕ್ಕೆ ಸೇರಿಸಿಕೊಂಡಿರುತ್ತೇನೆ. ಸಾಕ್ಷಿ ನಿಪಿ-4 ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-4(ಬಿ) ಎಂದು ಗುರುತಿಸಲಾಯಿತು. ದಿಃ 11.10.2024 ರಂದು ತನಿಖೆಯನ್ನು ಪೂರ್ಣಗೊಳಿಸಿ ಆರೋಪಿಗಳ ವಿರುದ್ದ ಮಾನ್ಯ ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿ ಸಲ್ಲಿಸಿರುತ್ತೇನೆ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಎ ಆರ್ ಯು ವಕೀಲರಿಂದಃ**

ಚಾಸಾ5 ನನ್ನ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ ಎಂದರೆ ಸರಿಯಲ್ಲ. ಚಾಸಾ2 ರವರ ಜೊತೆ ಶರೀಖಾಗಿ ಚಾಸಾ8 ರವರ ಮೂಲಕ ನಿಪಿ-4 ನ್ನು ಸೃಷ್ಟಿ ಮಾಡಿರುತ್ತೇವೆಂದರೆ ಸರಿಯಲ್ಲ. ಈ ಹಿಂದೆ 15.06.2024 ಮತ್ತು 07.08.2024 ರಂದು ಆರೋಪಿಗಳು ತಮಗೆ ರಕ್ಷಣೆ ನೀಡುವಂತೆ ನಮ್ಮ ಠಾಣೆಗೆ ದೂರು ನೀಡಿದ್ದರು ಎಂದರೆ ನನಗೆ ಗೊತ್ತಿಲ್ಲ. ನಾನು ಸರಿಯಾದ

ತನಿಖೆಯನ್ನು ಮಾಡದೇ ಆರೋಪಿಗಳ ವಿರುದ್ದ ಸುಳ್ಳು ದೋಷಾರೋಪಣಾ ಪಟ್ಟಿ ಸಲ್ಲಿಸಿ ಸುಳ್ಳು ಸಾಕ್ಷ್ಯಾ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲಾ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಲಾಗಿದೆ).

ಓ ಹೇ ಕೇ ಸರಿ ಇದೆ.

Sd/-

**(ದೀಪು.ಬಿ.ಸಿ)**

ಸಿವಿಲ್ ನ್ಯಾಯಾಧೀಶರು ಮತ್ತು

ಜೆ.ಎಂ.ಎಫ್.ಸಿ., ತುರುವೇಕೆರೆ.